# ಪ್ರಧಾನ ಸಿ.ಜೆ. ಮತ್ತು ಜೆ ಎಂಎಫ್‌ಸಿ ನ್ಯಾಯಾಲಯ, ಮದ್ದೂರು

| | | |
|---|---|---|
| ಸಾಕ್ಷಿಯ ಹೆಸರು | :- | ಕುಮಾರ |
| ತಂದೆ/ ಗಂಡನ ಹೆಸರು | :- | ಲೇಟ್ ಸೀತರಾಮಯ್ಯ |
| ವಯಸ್ಸು | :- | 72 ವರ್ಷ |
| ಉದ್ಯೋಗ | :- | ನಿವೃತ್ತ ಎಎಸ್ ಐ |
| ವಾಸಸ್ಥಳ | :- | ಮೈಸೂರು |

(ಸಾಕ್ಷಿಗೆ ದಿನಾಂಕಃ 27-10-2025 ರಂದು ಪ್ರಮಾಣ ವಚನ ಬೋಧಿಸಲಾಯಿತು)

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ನಾನು 2006 ರಿಂದ 2014 ರವರೆಗೆ ಮೈಸೂರು ರೈಲ್ವೇ ಪೊಲೀಸ್ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 22-08-2014 ರಂದು ರಾತ್ರಿ 10-00 ಗಂಟೆ ಸಮಯದಲ್ಲಿ ನಾನು ಠಾಣಾ ಪ್ರಭಾರ ಕರ್ತವ್ಯದಲ್ಲಿದ್ದಾಗ ಚಾಸಾ-1 ರವರು ಠಾಣೆಗೆ ಹಾಜರಾಗಿ ಕೊಟ್ಟ ಲಿಖಿತ ದೂರನ್ನು ಸ್ವೀಕರಿಸಿ, ಪ್ರಕರಣ ದಾಖಲು ಮಾಡಿ, ಪ್ರ ವ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಹಿರಿಯಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ನಿಪಿ- 1 ರ ದೂರಿನಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಈಗ ನಾನು ದಾಖಲಿಸಿದ್ದ ಪ್ರವವರದಿಯನ್ನು ನಿಪಿ- 9 ಎಂದು , ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು.

ಚಾಸಾ-1 ರವರು ಕತ್ತರಿಸಿದ ಮಾಂಗಲ್ಯ ಸರವನ್ನು ಹಾಜರುಪಡಿಸಿದ್ದು ಚಾಸಾ-4 ಮತ್ತು 5 ರವರ ಸಮಕ್ಷಮ ರಾತ್ರಿ 10-30 ರಿಂದ 11-00 ಗಂಟೆಯವರೆಗೆ ನಿಪಿ-2 ರಂತೆ ಮಹಜರ್ ಮಾಡಿ, ನಿಪಿ-5 ಮತ್ತು 6 ರಂತೆ ಸದರಿ ಮಾಂಗಲ್ಯ ಸರವನ್ನು ಅಮಾನತ್ತುಪಡಿಸಿಕೊಂಡಿರುತ್ತೇನೆ. ನಿಪಿ-2 ರಲ್ಲಿರುವ ಸಾಕ್ಷಿ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಘೋರ ಪ್ರಕರಣವಾದ್ದರಿಂದ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ- 16 ರವರಿಗೆ ವರ್ಗಾಯಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರವರಿಂದಃ**

ಚಾಸಾ-1 ರವರು ದಿಃ22-08-2014 ರಂದು ನಿಪಿ-1 ರಂತೆ ದೂರು ದಾಖಲಿಸಿದ್ದರು ಸುಳ್ಳು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಸದರಿ ದೂರಿಗೆ ಅನುಗುಣವಾಗಿ ನಿಪಿ-9 ರಂತೆ ಎಫ್ ಐ ಆರ್ ದಾಖಲಿಸಿದ್ದೇನೆಂದು ಸುಳ್ಳು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಚಾಸಾ-1 ರವರು ವಿವಾದಿತ ಸಮಯವಾದ 10-00 ಗಂಟೆಯಲ್ಲಿ ಠಾಣೆಗೆ ಹಾಜರಾಗಿರಲಿಲ್ಲ ಎಂದರೆ ಸರಿಯಲ್ಲ. ಮೇಲಾಧಿಕಾರಿಗಳ ಮಾತನ್ನು ಕೇಳಿಕೊಂಡು ದೂರನ್ನು 10-00 ಗಂಟೆಗೆ ಸ್ವೀಕರಿಸಿದ್ದಾಗಿ ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ನಿಪಿ-5 ಮತ್ತು 6 ರಂತೆ ಮಾಂಗಲ್ಯ ಸರವನ್ನು ಅಮಾನತ್ತುಪಡಿಸಿದ್ದಾಗಿ ಸುಳ್ಳು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನಿಪಿ-2 ನ್ನು ಚಾಸಾ-4 ಮತ್ತು 5 ರವರ ಸಮಕ್ಷಮ ಅಮಾನತ್ತುಪಡಿಸಿದ್ದಾಗಿ ಹೇಳಿದ್ದೇನೆಂದರೆ ಸರಿ. ನಿಪಿ-2 ರಲ್ಲಿ ರಮೇಶ್ ಎಂಬ ಸಹಿಯಿರದೇ ಸುರೇಶ್ ಎಂಬ ಸಹಿಯಿದೆ ಎಂದರೆ ಸರಿ. ನಾನು ನಿಪಿ-2 ನ್ನು ಚಾಸಾ-4 ಮತ್ತು 5 ರವರ ಸಮಕ್ಷಮ ಮಾಡಿರುವುದಾಗಿ ಸುಳ್ಳು ನುಡಿಯುತ್ತಿದ್ದು ಅದನ್ನು ಸೃಷ್ಟಿ ಮಾಡಿದ್ದೆವೆ ಎಂದರೆ ಸರಿಯಲ್ಲ. ನಿಪಿ-2 ನ್ನು ರಾತ್ರಿ 10-30 ರಿಂದ 11-00 ಗಂಟೆಯವರೆಗೆ ಮಾಡಿಲ್ಲದಿದ್ದರೂ ಮೇಲಾಧಿಕಾರಿಗಳ ಮಾತನ್ನು ಕೇಳಿಕೊಂಡು ಸುಳ್ಳು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಒ

(ಶ್ರೀಮತಿ ನಳಿನ ಎಸ್.ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು,
ಮದ್ದೂರು